ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಮುಖ್ಯ ಅಭಿಯಂತರವರ ಕಛೇರಿ, ದಾಸರಹಳ್ಳಿ ವಲಯ,
ಎಂ.ಇ.ಐ.ಬಡಾವಣೆ, ಬಾಗಲಗುಂಟೆ, ಹೆಸರಘಟ್ಟ ಮುಖ್ಯರಸ್ತೆ, ಬೆಂಗಳೂರು -560073.

ನಂ: ಮು.ಅ/ದಾವ/ತಾ.ಮ/45/2021-22 ದಿನಾಂಕ: 17/01/2022

ಮಾರ್ಪಾಡಿತ ತಾಂತ್ರಿಕ ಮಂಜೂರಾತಿ

ಕಾಮಗಾರಿ ಹೆಸರು: Improvements to road and drain KG Halli Gurunatha Layout and Surrounding in ward no 12 Shettyhalli. **P-Code: 2178**

ಮಾರ್ಪಾಡಿತ ಅಂದಾಜು ವೆಚ್ಚ: **92.41 ಲಕ್ಷಗಳು**

ಜಾಬ್ ಕೋಡ್: **012-20-000037**

ಉಲ್ಲೇಖ ಸಂಖ್ಯೆ:-
1. ಮಾನ್ಯ ಆಯುಕ್ತರವರು ನೀಡಿರುವ ಅಧಿಕಾರ ಪ್ರತ್ಯಾಯೋಜನೆ ಕಛೇರಿ ಆದೇಶ (ತಿದ್ದುಪಡಿ ಅಧಿಕಾರ ಪ್ರತ್ಯಾಯೋಜನೆ ನಡವಳಿಗಳು) ಪತ್ರ ಸಂ: ಬಿ12(1)/ಪಿಆರ್/394/2020-21, ದಿ: 04.02.2021.
2. ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ರವರ ಆಡಳಿತಾತ್ಮಕ ಅನುಮೋದನೆ ಮೆಮೋ ಸಂಖ್ಯೆ ಬಿಬಿಎಂಪಿ/ಕಾ.ಪಾ.ಅ/ದಾ.ವಿ/ಆ.ಮ/12/2020-21,ದಿ: 25.06.2021.
3. ಈ ಕಛೇರಿಯಿಂದ ನೀಡಿರುವ ತಾಂತ್ರಿಕ ಮಂಜೂರಾತಿ ಮೆಮೋ ಸಂಖ್ಯೆ: ಬಿಬಿಎಂಪಿ/ಮು.ಅ/ದಾ.ವ/ತಾ.ಮಂ/10/2020-21, ದಿನಾಂಕ: 05.07.2021.

****

ಮೇಲಿನ ವಿಷಯದಲ್ಲಿ ತಿಳಿಸಿರುವ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು, (ದಾಸರಹಳ್ಳಿ) ವಿಭಾಗ ರವರು ಮಾರ್ಪಾಡಿತ ತಾಂತ್ರಿಕ ಮಂಜೂರಾತಿಯನ್ನು ಕೋರಿರುವ ಮೇರೆಗೆ, ಉಲ್ಲೇಖ (2)&(03)ರಲ್ಲಿ ಅಂದಾಜು ಮೊತ್ತ ರೂ. 100.00 ಲಕ್ಷಗಳಿಗೆ ತಾಂತ್ರಿಕ ಮಂಜೂರಾತಿ ಮತ್ತು ಆಡಳಿತಾತ್ಮಕ ಅನುಮೋದನೆಯ ಕಛೇರಿ ಆದೇಶವನ್ನು ಹೊರಡಿಸಿದ್ದು, ಈಗ ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ವಿಭಾಗ ರವರು ಸಲ್ಲಿಸಿರುವ ಮಾರ್ಪಾಡಿತ ಅಂದಾಜು ಪಟ್ಟಿಯ ಮೊತ್ತ ರೂ. 92.41 ಲಕ್ಷ (**ರೂ. ತೊಂಭತ್ತೆರಡು ಲಕ್ಷದ ನಲವತ್ತೊಂದು ಸಾವಿರದ ಏಳು ನೂರ ಅರವತ್ತೊಂದು ರೂಪಾಯಿ)ಗಳಿಗೆ** ಮಾರ್ಪಾಡಿತ ತಾಂತ್ರಿಕ ಮಂಜೂರಾತಿ ನೀಡಲಾಗಿದೆ ಮತ್ತು ಮಾರ್ಪಾಡಿತ ತಾಂತ್ರಿಕ ಮಂಜೂ ರಾತಿಯ ಪುಸ್ತಕದ ಪುಟ ಸಂಖ್ಯೆ: 09 ಕ್ರಮ ಸಂಖ್ಯೆ:45 ದಿನಾಂಕ: 17/01/2022 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಈ ಮೊದಲು ಈ ಕಛೇರಿಯಿಂದ ನೀಡಲಾದ ತಾಂತ್ರಿಕ ಮಂಜೂರಾತಿಯನ್ನು ರದ್ದು ಪಡಿಸಿ, ಮಾರ್ಪಾಡಿತ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿ ನೀಡಿದೆ.

ಮುಖ್ಯ ಅಭಿಯಂತರರು
ದಾಸರಹಳ್ಳಿ ವಲಯ

ಪ್ರತಿಯನ್ನು ಮಾಹಿತಿಗಾಗಿ ಸಲ್ಲಿಸಿದೆ:-
1. ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ವಿಭಾಗ ರವರಿಗೆ ಮೂಲ ಅಂದಾಜು ಪಟ್ಟಿಯೊಂದಿಗೆ ಮುಂದಿನ ಕ್ರಮಕ್ಕಾಗಿ.
2. ಸಹಾಯಕ ಹಣಕಾಸು ನಿಯಂತ್ರಕರು, (ದಾಸರಹಳ್ಳಿ) ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
3. ಕಛೇರಿ ಪ್ರತಿ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
Bruhat Bengaluru Mahanagara Palike

ಮುಖ್ಯ ಅಭಿಯಂತರರು (ದಾಸರಹಳ್ಳಿ) ರವರ ಕಛೇರಿ,
ಎಂ.ಇ.ಐ ಬಡಾವಣೆ, ಬಾಗಲಗುಂಟೆ, ಹೆಸರಘಟ್ಟ ಮುಖ್ಯರಸ್ತೆ, ಬೆಂಗಳೂರು-560073.

ಸಂಖ್ಯೆ: ಮು.ಅ.(ದಾ)/ತಾ.ಮ./ 10 /2021-22 ದಿನಾಂಕ: 05/07/2021

"ತಾಂತ್ರಿಕ ಮಂಜೂರಾತಿ ಪತ್ರ"

ವಿಷಯ :- Improvements to Road and Drain KG Halli Gurunath layout and Surrounding area in ward no 12 Shettyhalliರ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡುವ ಬಗ್ಗೆ.

ಉಲ್ಲೇಖ :- ಕಾರ್ಯಪಾಲಕ ಅಭಿಯಂತರರು, ದಾಸರಹಳ್ಳಿ ವಿಭಾಗ ರವರ ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ: ಕಾ.ಪಾ.ಅ/ದಾ.ವಿ/ಆ.ಮ/12/2021-22, ದಿನಾಂಕ: 25.06.2021.

ಪ್ರಸ್ತಾವನೆ:-

ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ವಿಭಾಗ ರವರು ಮೇಲ್ಕಂಡ ಕಾಮಗಾರಿಯ ಅಂದಾಜು ಪಟ್ಟಿಯನ್ನು **ರೂ.88.41 ಲಕ್ಷ (ರೂ. ಎಂಭತ್ತೆಂಟು ಲಕ್ಷದ ನಲವತ್ತೊಂದು ಸಾವಿರದ ನಾಲ್ಕು ನೂರ ನಲವತ್ತಾರು ರೂಪಾಯಿ)ಗಳ** ಮೊತ್ತಕ್ಕೆ ತಯಾರಿಸಿ, ತಾಂತ್ರಿಕ ಮಂಜೂರಾತಿ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ವಿಭಾಗ ರವರ ಪ್ರಸ್ತಾವನೆಯನ್ನು ಪರಿಗಣಿಸಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

ಸದರಿ Improvements to Road and Drain KG Halli Gurunath layout and Surrounding area in ward no 12 Shettyhalliರ ಕಾಮಗಾರಿಯ ಅಂದಾಜು ಮೊತ್ತ **ರೂ.100.00 ಲಕ್ಷ (ರೂ. ನೂರು ಲಕ್ಷ)ಗಳ** ಮೊತ್ತಕ್ಕೆ 2019-20ನೇ ಸಾಲಿನ ಆಯವ್ಯಯ ಪಿ-2178ರ ಅನುದಾನದಡಿಯಲ್ಲಿ ಜಾಬ್ ಸಂಖ್ಯೆ 012-20-000037 ನೀಡಲಾಗಿರುತ್ತದೆ. ಸದರಿ ಅಂದಾಜು ಪಟ್ಟಿಗೆ ಈ ಕಛೇರಿಯ ತಾಂತ್ರಿಕ ಮಂಜೂರಾತಿ ದಾಖಲಾತಿಯ ವಹಿಯ **ಕ್ರಮ ಸಂಖ್ಯೆ.10, ಮತ್ತು ಪುಟ ಸಂಖ್ಯೆ:25** ರಲ್ಲಿ ನೊಂದಾಯಿಸಿ **ರೂ.88.41 ಲಕ್ಷ (ರೂ. ಎಂಭತ್ತೆಂಟು ಲಕ್ಷದ ನಲವತ್ತೊಂದು ಸಾವಿರದ ನಾಲ್ಕು ನೂರ ನಲವತ್ತಾರು ರೂಪಾಯಿ)ಗಳಿಗೆ** ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ.

ಷರತ್ತುಗಳು :-

1. ಪ್ರಸ್ತಾಪಿತ ಅಂದಾಜು ಪಟ್ಟಿಯಲ್ಲಿ ಅಳವಡಿಸಿಕೊಂಡಿರುವ ವಿಶಿಷ್ಠ ವಿವರಣೆ / ವಿಶಿಷ್ಠತೆ ಸ್ಥಳಕ್ಕೆ ಅನುಗುಣವಾಗಿರುವುದರ ಬಗ್ಗೆ.
2. ಅಂದಾಜು ಪಟ್ಟಿಯಲ್ಲಿ ಪ್ರಸ್ತಾಪಿಸಿರುವ ರಸ್ತೆಗಳನ್ನು ಕಳೆದ ಮೂರು ವರ್ಷಗಳಿಂದ ಯಾವುದೇ ಅನುದಾನದಲ್ಲಿ ಅಭಿವೃದ್ಧಿಗೊಳ್ಳಿಸದೇ ಇರುವುದರ ಬಗ್ಗೆ.
3. ಪ್ರಸುತ್ತ ಉದ್ದೇಶಿಸಿರುವ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವುದಕ್ಕೆ ಪೂರಕವಾಗಿ ಈ ಹಿಂದೆ ಅಭಿವೃದ್ಧಿ ಕಾಮಗಾರಿಗಳ ನಿರ್ವಹಣೆ ಅಂಶಗಳ ವಿವರಗಳನ್ನು ರಸ್ತೆ ಇತಿಹಾಸ (Road History) ಪ್ರಸ್ತಕದಲ್ಲಿ ಕಾಮಗಾರಿಯ ವಿವರಗಳನ್ನು ನಮೂದಿಸಿ ನಿರ್ವಹಿಸಿರುವುದರ ಬಗ್ಗೆ.
4. ಪ್ರಸ್ತಾಪಿತ ಕಾಮಗಾರಿಯ ಅಂದಾಜು ಪಟ್ಟಿಯಲ್ಲಿ ಅಳವಡಿಸಿಕೊಂಡಿರುವ ಅನುಪಯುಕ್ತ (Debris) ವಸ್ತುಗಳ ಸಾಗಾಣಿಗೆ ಪೂರಕವಾಗಿ ವಲಯ ವ್ಯಾಪ್ತಿಯ ಅನುಮೋದಿತ (Notified Dumping Yard)ಗೆ ಅನುಗುಣವಾಗಿ ಕಾಮಗಾರಿಯನ್ನು ನಿರ್ವಹಿಸುವ ಸ್ಥಳದಿಂದ Dumping Yardಗೆ ಇರುವ ಅಂತರಕ್ಕೆ ಸಂಬಂಧಿಸಿದಂತೆ Lead Chart ನ್ನು ತಯಾರಿಸಿ ಅನುಮೋದನೆ ಪಡೆದುಕೊಳ್ಳುವ ಬಗ್ಗೆ.
5. Non S.R ದರಗಳಿಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದಿರುವ ಬಗ್ಗೆ.
6. ಪ್ರಸ್ತಾಪಿತ ಕಾಮಗಾರಿಗೆ ಸಂಬಂಧಿಸಿದಂತೆ Defect Liability Period ಮುಗಿದಿರುವ ಬಗ್ಗೆ.
7. ತೆರವುಗೊಳಿಸಿರುವ ಉಪಯುಕ್ತ ಸಾಮಾಗ್ರಿಗಳ ಬಗ್ಗೆ **MAS** ನ ವಹಿಯಲ್ಲಿ ದಾಖಲಿಸುವುದು ಹಾಗೂ ಈ ತರಹದ ಉಪಯುಕ್ತ ಸಾಮಾಗ್ರಿಗಳನ್ನು ಬೇರೆಡೆ ಉಪಯೋಗಿಸಿರುವ (ಮರು ಬಳಿಕೆ ಮಾಡಿರುವ) ಬಗ್ಗೆ ಪ್ರತ್ಯೇಕ ವಹಿಯಲ್ಲಿ ದಾಖಲಿಸಿ ದೃಢೀಕರಿಸಿಕೊಳ್ಳುವುದು.
8. ತಳಪಾಯದ ವಿನ್ಯಾಸವನ್ನು ಸಿದ್ದಗೊಳಿಸಿ ಕೆಲಸ ಆರಂಭಿಸುವ ಮುನ್ನ ಈ ಕಛೇರಿಯ ಒಪ್ಪಿಗೆಯನ್ನು ಪಡೆಯತಕ್ಕದ್ದು.

ಮು.ತಿ.ನೋ

9. ಸದರಿ ಕಾಮಗಾರಿಗೆ ನೀಡಲಾದ ನಿವೇಶನದ ಲಭ್ಯತೆ ಬಗ್ಗೆ ಟೆಂಡರ್ ಕರಾರು ಮಾಡುವ ಮುನ್ನ ಧೃಡೀಕರಿಸಿ ಕೊಳ್ಳತಕ್ಕದ್ದು.
10. ಪ್ರಸುತ್ತ ಉದ್ದೇಶಿಸಿರುವ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವುದಕ್ಕೆ ಪೂರಕವಾಗಿ ಈ ಹಿಂದೆ ಅಭಿವೃದ್ಧಿ ಕಾಮಗಾರಿಗಳ ನಿರ್ವಹಣೆ ಅಂಶಗಳ ವಿವರಗಳನ್ನು ರಸ್ತೆ ಇತಿಹಾಸ (Road History) ಪ್ರಸ್ತಕದಲ್ಲಿ ಕಾಮಗಾರಿಯ ವಿವರಗಳನ್ನು ನಮೂದಿಸಿ ನಿರ್ವಹಿಸಿರುವುದರ ಬಗ್ಗೆ.
11. ನಿಗದಿಯಾದ ದರಪಟ್ಟಿಯಲ್ಲಿಲ್ಲದ ದರಗಳಿಗೆ (Data Rate) ಮತ್ತು ದರಗಳ ವಿವರಗಳಿಗೆ (Rate Analysis) ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯ ತಕ್ಕದ್ದು.
12. ಅಂದಾಜು ಪಟ್ಟಿಯಲ್ಲಿ ಅಳವಡಿಸಿರುವ ಇಡಗಂಟು ರೂಪದಲ್ಲಿ ಒದಗಿಸಲಾಗಿರುವ (LumpSum Provisions) ಮೊತ್ತಗಳಿಗೆ ಉಪಅಂದಾಜನ್ನು ತಯಾರಿಸಿ ಅನುಮೋದನೆ ಪಡೆಯ ತಕ್ಕದ್ದು.
13. ಸದರಿ ಕಾಮಗಾರಿಗೆ ಟೆಂಡರ್ ಆಹ್ವಾನಿಸುವಾಗ Stander Tender Document KW - 1/2/3/4 ಹಾಗೂ ಆಗಿಂದಾಗ್ಗೆ ಹೊರಡಿಸುವ ತಿದ್ದುಪಡಿಗಳನ್ನು ಅಳವಡಿಸಿಕೊಂಡು ಟೆಂಡರ್ ಆಹ್ವಾನಿಸತಕ್ಕದ್ದು.
14. ಪ್ರಸ್ತಾಪಿತ ಕಾಮಗಾರಿಗೆ ಸಂಬಂಧಿಸಿದ ನಕ್ಷೆಯಂತೆ ವಿನ್ಯಾಸಗಳನ್ನು ಪಡೆದು ಕಾಮಗಾರಿಯನ್ನು ನಿರ್ವಹಿಸುವ ಬಗ್ಗೆ.
15. ಕಾಮಗಾರಿಯು ಎಲ್ಲಾ ಹಂತದಲ್ಲಿನ ಕಾಮಗಾರಿಯ ಪೂರ್ವ / ಪ್ರಗತಿ / ಪೂರ್ಣಗೊಂಡ ಛಾಯಾ ಚಿತ್ರವನ್ನು ಲಗತ್ತಿಸುವುದು.
16. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದವರಿಗೆ ಕಾಮಗಾರಿಯ ಟೆಂಡರ್‌ನಲ್ಲಿ ಭಾಗವಹಿಸುವ ಬಗ್ಗೆ ಮಾನ್ಯ ಆಯುಕ್ತರವರ ದಿನಾಂಕ:02/11/2017ರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ:ಆ./ಪಿ.ಆರ್/5054/2017-18 ರಂತೆ ಕ್ರಮವಹಿಸುವುದು.
17. ಸದರಿ ಕಾಮಗಾರಿಯ ಬಿಲ್ ಪಾವತಿಸುವ ಸಂದರ್ಭದಲ್ಲಿ ಮಂಜೂರಾದ ತಾಂತ್ರಿಕ ಮಂಜೂರಾತಿಯ ಮೊತ್ತಕ್ಕೆ ಜಿ.ಎಸ್.ಟಿ / ಇತರೆ ತೆರಿಗೆಗಳನ್ನು ಸೇರಿಸಿಕೊಳ್ಳತಕ್ಕದ್ದು.

ಮುಖ್ಯ ಅಭಿಯಂತರರು (ದಾಸರಹಳ್ಳಿ)
ಬೃಹತ್ ಬೆಂಗಳೂರು ಮಹಾನಗರಪಾಲಿಕೆ

ಪ್ರತಿಯನ್ನು:-

1. ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ವಿಭಾಗ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಯವರ ಗಮನಕ್ಕೆ ಕಳುಹಿಸಿದೆ.
3. ಕಛೇರಿ ಕಡತಕ್ಕೆ.